ಇ) ನೆಲಮಂಗಲ ತಾಲ್ಲೂಕಿನ ಅರಸಿನಕುಂಟೆ ಗ್ರಾಮವನ್ನು ಪಟ್ಟಣ ಪಂಚಾಯತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಈ) ಮೇಲಿನ ಉಪ ಪ್ರಶ್ನೆ(ಇ)ರ ಉತ್ತರದಿಂದ ಉದ್ಭವಿಸುವುದಿಲ್ಲ.

ಉ) ನೆಲಮಂಗಲಕ್ಕೆ ಸಂಬಂಧಿಸಿದ ಪ್ರಸ್ತಾವನೆಯಲ್ಲಿ ಕೆಲವು ಮಾಹಿತಿಗಳು ಲಭ್ಯವಿಲ್ಲದಿರುವುದು ಮತ್ತು ಅಪೂರ್ಣವಾಗಿರುವುದು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಪರಿಶೀಲನೆಯ ಹಂತದಲ್ಲಿ ಕಂಡುಬಂದಿದ್ದು, ಅಗತ್ಯವಿರುವ ಹೆಚ್ಚುವರಿ ಮಾಹಿತಿಗಳನ್ನು ಜಿಲ್ಲಾಧಿಕಾರಿಗಳಿಂದ ಪಡೆದು ಪರಿಶೀಲಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

ಅರಸಿನಕುಂಟೆ ಗ್ರಾಮಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಪ್ರಸ್ತಾವನೆ ಇರುವುದಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಪಡೆದು ಪರಿಶೀಲಿಸಲಾಗುವುದು.

ನೆಲಮಂಗಲ ಪಟ್ಟಣದ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

656(1108); ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) ನೆಲಮಂಗಲ ಪಟ್ಟಣದ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಲು ಹೇಮಾವತಿ ಅಥವಾ ಕಾವೇರಿ ನದಿಗಳಿಂದ ನೀರನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು; (ವಿವರಗಳನ್ನು ನೀಡುವುದು);

ಇ) ನೆಲಮಂಗಲ ಪಟ್ಟಣದ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಲು ಈ ಯೋಜನೆಗೆ ಸರ್ಕಾರ ಅನುದಾನವನ್ನೇನಾದರೂ ನಿಗದಿಪಡಿಸಿದೆಯೇ;

ಈ) ಹಾಗಿದ್ದಲ್ಲಿ ಎಷ್ಟು ಮೊತ್ತದ ಅನುದಾನವನ್ನು ನಿಗದಿಪಡಿಸಲಾಗಿದೆ ಮತ್ತು ಈ ಯೋಜನೆಯ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು;

ಉ) ಹಾಗಿಲ್ಲದಿದ್ದಲ್ಲಿ, ನೆಲಮಂಗಲ ಪಟ್ಟಣದ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಲು ಸರ್ಕಾರ ಬೇರೆ ಯಾವುದಾದರೂ ಯೋಜನೆಯನ್ನು ರೂಪಿಸಿದೆಯೇ; ಹಾಗಿದ್ದಲ್ಲಿ ಯಾವ ಯೋಜನೆಯನ್ನು ರೂಪಿಸಿದೆ; (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು)

ಅ) ಸರ್ಕಾರದ ಹಂತದಲ್ಲಿ ಪ್ರಸ್ತಾವನೆ ಇರುವುದಿಲ್ಲ.

ಆ) ನೆಲಮಂಗಲ ಪಟ್ಟಣಕ್ಕೆ 58 ಕಿ.ಮೀ. ದೂರದಲ್ಲಿ ಹೇಮಾವತಿ ನಾಲೆಯ ಸರಪಳಿ 140 ಮೀ. ರಲ್ಲಿ ನೀರನ್ನು ಪಡೆದುಕೊಂಡು ತ್ಯಾಮಗೊಂಡ್ಲು ಕೆರೆಯಲ್ಲಿ ಶೇಖರಿಸಿ ನೆಲಮಂಗಲ ಹಾಗೂ ಮಾರ್ಗ ಮಧ್ಯದ 32 ಹಳ್ಳಿಗಳಿಗೆ ಶುದ್ಧೀಕರಿಸಿದ ನೀರನ್ನು ಒದಗಿಸುವ ಪ್ರಸ್ತಾವನೆಯು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ಪರಿಶೀಲನೆಯಲ್ಲಿದ್ದು, ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಪರಿಶೀಲಿಸಲಾಗುವುದು.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.